ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಬೀದರ್ ನಗರದಲ್ಲಿ ನೂರು ಹಾಸಿಗೆಗಳ ಆಸ್ಪತ್ರೆ ಉದ್ಘಾಟನೆ ಆಗದಿರುವ ಕುರಿತು

ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

617(664) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್ ನಗರದಲ್ಲಿ ನೂರು ಹಾಸಿಗೆಗಳ ಆಸ್ಪತ್ರೆಯನ್ನು ನಿರ್ಮಿಸಿ ಸುಮಾರು ವರ್ಷಗಳೇ ಕಳೆದರೂ ಅದಕ್ಕೆ ಮೂಲಭೂತ ಸೌಕರ್ಯ ಒದಗಿಸದಿರುವುದಕ್ಕೆ ಕಾರಣವೇನು; ಈ ಆಸ್ಪತ್ರೆಯ ಉದ್ಘಾಟನೆ ಇಲ್ಲಿಯವರೆಗೆ ಆಗದೇ ಇರಲು ಕಾರಣವೇನು;

(ಆ) ಸದರಿ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸಿಬ್ಬಂದಿಗಳು ಇಲ್ಲಿಯವರೆಗೆ ನೇಮಕಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವೈದ್ಯರು ಮತ್ತು ಸಿಬ್ಬಂದಿಗಳ ನೇಮಕಾತಿ ಮಾಡಿ ಜನರ ಉಪಯೋಗಕ್ಕೆ ಒದಗಿಸುವುದು ಯಾವಾಗ?